ಇ) ಅಗತ್ಯತೆಗೆ ಅನುಗುಣವಾಗಿ ಹೊಸ ವಾಹನಗಳನ್ನು ಚನ್ನರಾಯಪಟ್ಟಣ ಘಟಕಕ್ಕೆ ನೀಡಲಾಗುವುದು

ಈ) ಪ್ರಸಕ್ತ ಸಾಲಿನಲ್ಲಿ ಇಲ್ಲಿಯವರೆವಿಗೆ ಒಟ್ಟು 16 ಹೊಸ ವಾಹನಗಳನ್ನು ಚನ್ನರಾಯಪಟ್ಟಣ ಘಟಕಕ್ಕೆ ನೀಡಲಾಗಿದ್ದು ಹಾಗೂ ಅಗತ್ಯತೆಗೆ ಅನುಗುಣವಾಗಿ ಹೊಸ ವಾಹನಗಳನ್ನು ಸದರಿ ಘಟಕಕ್ಕೆ ನೀಡಲಾಗುವುದು.

ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

412(983); ಶ್ರೀ ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೋಳ)

ಅ) ಚನ್ನರಾಯಪಟ್ಟಣ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಆ) ಹಾಗಿದ್ದಲ್ಲಿ, ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಚನ್ನರಾಯಪಟ್ಟಣದಲ್ಲಿ ಡಯಾಲಿಸಿಸ್ ಕೇಂದ್ರವನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಊ) ಹಾಗಿದ್ದಲ್ಲಿ ಯಾವಾಗ ಡಯಾಲಿಸಿಸ್ ಕೇಂದ್ರವನ್ನು ತೆರೆಯಲಾಗುವುದು (ವಿವರಗಳನ್ನು ನೀಡುವುದು) ;

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ

ಆ) ರಾಜ್ಯದಲ್ಲಿ ಅವಶ್ಯಕತೆಗಿಂತ ಹೆಚ್ಚುವರಿಯಾಗಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಹೊಸದಾಗಿ ಮಂಜೂರು ಮಾಡಲ್ಪಟ್ಟ/ಮೇಲ್ದರ್ಜೆಗೇರಿಸಲ್ಪಟ್ಟ ಆಸ್ಪತ್ರೆಗಳ ಹಾಸಿಗೆ ಸಾಮರ್ಥ್ಯಕ್ಕೆ ಅನುಗುಣವಾಗಿ ಅವಶ್ಯವಿರುವ ಔಷಧಿಗಳನ್ನು ಪೂರೈಸಲಾಗುತ್ತಿದ್ದು, ಅವುಗಳಿಗೆ ಖಾಯಂ ಕಟ್ಟಡಗಳನ್ನು ಮತ್ತು ಸಿಬ್ಬಂದಿಯನ್ನು ನಿಗದಿತ ಮಟ್ಟಕ್ಕೆ ಒದಗಿಸಲಾಗಿಲ್ಲ. ಅಲ್ಲದೇ ಈಗಾಗಲೇ ಸ್ಥಾಪಿಸಿರುವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಮೇಲ್ಪಟ್ಟ ಆಸ್ಪತ್ರೆಗಳಿಗೆ ತಜ್ಞ ವೈದ್ಯರ ಅವಶ್ಯಕತೆ ಇರುವುದರಿಂದ ಈ ಕೊರತೆ ನಿವಾರಿಸಲು ಪ್ರಥಮ ಆದ್ಯತೆ ನೀಡಲಾಗುತ್ತಿದೆ.

ಇ) ಬಂದಿದೆ

ಈ) ಸದರಿ ಆಸ್ಪತ್ರೆಗೆ ಅವಶ್ಯಕತೆಗೆ ಅನುಗುಣವಾಗಿ ಬೇಕಾಗುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನ ಮತ್ತು ಹಿರಿಯ ನಾಗರೀಕ ಸಬಲೀಕರಣ ಇಲಾಖೆ ದಿನಾಂಕ: 23.01.2015 ರಂದು ವಿಕಲಚೇತನರಿಗೆ ಮೀಸಲಾತಿ ಕುರಿತಂತೆ ಸಭೆ ಜರುಗಿದ್ದು, ಸಭೆಯ ನಡವಳಿ ಇನ್ನೂ ಅನುಮೋದನೆ ಆಗಬೇಕಾಗಿದೆ. ಈ ನಡವಳಿಯ ಆಧಾರದ ಮೇಲೆ ಸಿ.ಆ.ಸು.ಇಲಾಖೆ ಅಂತಿಮ ಅಧಿಸೂಚನೆ ಹೊರಡಿಸಲಿದೆ. ತದನಂತರ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು.

ಉ) ಚನ್ನರಾಯಪಟ್ಟಣದಲ್ಲಿ ಡಯಾಲಿಸಿಸ್ ಕೇಂದ್ರವನ್ನು ತೆರೆಯುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ. ಆದರೆ 2015–16ನೇ ಸಾಲಿನಲ್ಲಿ

ಮತ್ತೊಮ್ಮೆ ಪ್ರತಿ ಜಿಲ್ಲೆಯ ಮತ್ತೊಂದು ತಾಲ್ಲೂಕಿನಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯುವ ಸಂದರ್ಭದಲ್ಲಿ ಪರಿಶೀಲಿಸಲಾಗುವುದು.

ಊ) ಇಲಾಖೆಯಲ್ಲಿ ಲಭ್ಯವಿರುವ ವೈದ್ಯರು, ತಜ್ಞ ವೈದ್ಯರು ಇತರೆ ಸಿಬ್ಬಂದಿ ಮತ್ತು ಮೂಲಭೂತ ಸೌಲಭ್ಯಗಳನ್ನು ಉಪಯೋಗಿಸಿಕೊಂಡು ಉತ್ತಮ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳಲಾಗಿದೆ.

ಹಾಸ್ಟೆಲ್‌ಗಳಿಗೆ ಮೂಲಭೂತ ಸೌಲಭ್ಯಗಳು

413(984); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೊಳಪಡುವ ಬಾಲಕರ/ಬಾಲಕಿಯರ ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಅವು ಯಾವುವು (ಪೂರ್ಣ ವಿವರಗಳನ್ನು ನೀಡುವುದು);

ಆ) ಹಾಗಿದ್ದಲ್ಲಿ, ಈ ಹಾಸ್ಟೆಲ್‌ಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವ್ಯವಸ್ಥೆ ಕಲ್ಪಿಸಲಾಗಿದೆ; ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಒದಗಿಸಲಾಗಿರುವ ಸೌಲಭ್ಯಗಳೇನು (ಪೂರ್ಣ ವಿವರಗಳನ್ನು ನೀಡುವುದು);

ಇ) ಈ ವಸತಿ ನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿವೆಯೇ ಅಥವಾ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆಯೇ (ಸಂಪೂರ್ಣ ಮಾಹಿತಿ ನೀಡುವುದು);

ಈ) ಈ ವಿದ್ಯಾರ್ಥಿ ನಿಲಯಗಳಲ್ಲಿ ಸಿಬ್ಬಂದಿಗಳ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?